## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಮಂಜು, ಕಾರ್ಯದರ್ಶಿ, ಕೋಟಾ ಗ್ರಾಮ ಪಂಚಾಯತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ-ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/144/ಗ್ರಾಪಂಕಾ/2013 ದಿನಾಂಕ: 25-07-2013
2. ಅಪರ ನಿಭಂಧಕರು ವಿಚಾರಣೆಗಳು-10 ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: LOK/INQ/14-A/ 318/2013/ARE-10 Dt:22-07-2016
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪರಿಷ್ಕೃತ ಶಿಫಾರಸ್ಸು ಸಂಖ್ಯೆ: LOK/ARE-10/ENQ-318/2013 Dt:07-02-2017.
4. ನಿಭಂಧಕರು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಪತ್ರ ಸಂಖ್ಯೆ: LOK/ARE-10 /ENQ-318/2013 Dt:08-02-2017.
5. ಸರ್ಕಾರದ ಪರಿಷ್ಕೃತ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/45/ಗ್ರಾಪಂಕಾ/2016 ದಿನಾಂಕ:28-04-2017.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಮಂಜು, ಕಾರ್ಯದರ್ಶಿ, ಕೋಟಾ ಗ್ರಾಮ ಪಂಚಾಯತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಆದರಂತೆ ಅಪರ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಇವರು ಶ್ರೀ ಮಂಜು, ಕಾರ್ಯದರ್ಶಿ ಇವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

The charge of misconduct, alleged against the DGO was that, while he was working as Secretary, Kota Gram Panchayath, Kundapur Taluk, Udupi District, he was called upon to submit his comments in respect of a complaint bearing No.Comp/Uplok/Mys/990/2008/ARE-6 date:10/12/2006 pending before the Lokayukta institution, filed by on Sri D. Vasudeva Shetty, s/o H.Padmaiah Shetty, r/o Belur Grama. Jundapur Taluk, Udupi District the DGO failed to submit his comments despite severalreminders. Even after service of notice through Lokayukta Police, the DGO did not submit his reply even did not respond to the show cause notice issued to him, thereby, for the disobedience of the orders passed by Lokayukta institution, recommendation for initistion of disciplinary proceedings was made. Thereb, the DGO has failed tom maintain absolute integrity and devotion to the duty. As a result, he committed the misconduct within the meaning of Rule 3(1) (i) to (iii) of the KCS (Conduct) Rules.

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಮಂಜು, ಕಾರ್ಯದರ್ಶಿ, ಕೋಟಾ ಗ್ರಾಮ ಪಂಚಾಯತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಮಂಜು, ಕಾರ್ಯದರ್ಶಿ, ಕೋಟಾ ಗ್ರಾಮ ಪಂಚಾಯತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ, ಇವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(iii)

ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ "ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ರಹಿತ ಪರಿಣಾಮದೊಂದಿಗೆ ಐದು ವರ್ಷಗಳ ಅವಧಿಗೆ ತಡೆಹಿಡಿಯಿವ" ದಂಡನೆ ವಿಧಿಸಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ

ಈ ಸಂಬಂಧ ಶ್ರೀ ಮಂಜು, ಕಾರ್ಯದರ್ಶಿ, ಕೋಟಾ ಗ್ರಾಮ ಪಂಚಾಯತಿ ಇವರಿಗೆ ನಿಯಮಾನುಸಾರ ಕ್ರಮಸಂಖ್ಯೆ (5) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ, ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ಅನ್ನು ಜಾರಿಗೊಳಿಸಲಾಗಿತ್ತು. ಈ ನೋಟೀಸಿಗೆ ಶ್ರೀ ಮಂಜು, ಕಾರ್ಯದರ್ಶಿ ರವರು ತಮ್ಮ ಸಮಜಾಯಿಷಿಯನ್ನು ಸಲ್ಲಿಸಿರುವುದಿಲ್ಲ.

ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿರುತ್ತಾರೆ ಮತ್ತು ಆರೋಪದ ತೀವ್ರತೆಗೆ ಅನುಗುಣವಾಗಿ ಮಾನ್ಯ ಉಪಲೋಕಾಯುಕ್ತರು ಶ್ರೀ ಮಂಜು, ಕಾರ್ಯದರ್ಶಿ ರವರಿಗೆ "ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ರಹಿತ ಪರಿಣಾಮದೊಂದಿಗೆ ಐದು ವರ್ಷಗಳ ಅವಧಿಗೆ ತಡೆಹಿಡಿಯಿವ" ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ ಎಲ್ಲಾ ಅಂಶಗಳನ್ನು ಹಿನ್ನೆಲೆಯಲ್ಲಿ ಸರ್ಕಾರವು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 8(iii) ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ **"ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ರಹಿತ ಪರಿಣಾಮದೊಂದಿಗೆ ಐದು ವರ್ಷಗಳ ಅವಧಿಗೆ ತಡೆಹಿಡಿಯಿವ"** ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 455 ಗ್ರಾಪಂಕಾ 2016 ಬೆಂಗಳೂರು, ದಿನಾಂಕ-04-11-2017.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಮಂಜು, ಕಾರ್ಯದರ್ಶಿ, ಕೋಟಾ ಗ್ರಾಮ ಪಂಚಾಯತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿರುವುದರಿಂದ ಶ್ರೀ ಮಂಜು, ಕಾರ್ಯದರ್ಶಿ, ಕೋಟಾ ಗ್ರಾಮ ಪಂಚಾಯತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ ಯಮ 8(iii) ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ **"ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ರಹಿತ ಪರಿಣಾಮದೊಂದಿಗೆ ಐದು ವರ್ಷಗಳ ಅವಧಿಗೆ ತಡೆಹಿಡಿಯಿವ"** ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಉಡುಪಿ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ.
6. ಶ್ರೀ ಮಂಜು, ಕಾರ್ಯದರ್ಶಿ, ಕೋಟಾ ಗ್ರಾಮ ಪಂಚಾಯತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.